ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19 :** **ದಿನಾಂಕ : 6–08–2018**

# ಪತ್ರಿಕಾ ಪ್ರಕಟಣೆ

**ಸಂಖ್ಯೆ: 779/899**

## ಸಂತಾಪ

ಬೆಂಗಳೂರು, ಆಗಸ್ಟ್ 6, (ಕರ್ನಾಟಕ ವಾರ್ತೆ)

ಕನ್ನಡ ಚಲನಚಿತ್ರ ರಂಗದ ಹಿರಿಯ ನಿರ್ಮಾಪಕ, ವಿತರಕ ಹಾಗೂ ಪ್ರದರ್ಶಕ ಎಂ. ಭಕ್ತವತ್ಸಲ ಅವರ ನಿಧನಕ್ಕೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಚಿವೆ ಡಾ: ಜಯಮಾಲ ಅವರು ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ.

ಎಂ. ಭಕ್ತವತ್ಸಲ ಅವರು ಚಲನಚಿತ್ರ ರಂಗದ ಹಲವಾರು ಕ್ಷೇತ್ರಗಳಲ್ಲಿ ಅನುಭವವುಳ್ಳವರಾಗಿದ್ದರು. ಪ್ರದರ್ಶಕರಾಗಿ ನಿರ್ಮಾಪಕರಾಗಿ ವಿತರಕರಾಗಿ ಹಾಗೂ ನಟರಾಗಿಯೂ ಅಭಿನಯಿಸಿದ್ದ ಅವರು ಚಲನಚಿತ್ರರಂಗದ ಆಲ್‌ರೌಂಡರ್ ಆಗಿದ್ದರು.

ಕರ್ನಾಟಕ ಚಲನಚಿತ್ರ ಮಂಡಳಿಯ ಅಧ್ಯಕ್ಷರಾಗಿ 7 ವರ್ಷ ಕಾಲ ಕಾರ್ಯನಿರ್ವಹಿಸಿದ್ದ ಅವರು ದಕ್ಷಿಣ ಭಾರತ ಚಲನಚಿತ್ರ ವಾಣಿಜ್ಯ ಮಂಡಳಿ ಅಧ್ಯಕ್ಷರಾಗಿ ಸಹ ಸೇವೆ ಸಲ್ಲಿಸಿದ್ದರು. ಭಾರತ ಚಲನಚಿತ್ರ ಮಂಡಳಿಯ ಅಧ್ಯಕ್ಷರಾಗಿದ್ದ ಏಕೈಕ ಕನ್ನಡಿಗ. ಅವರ ಸಾಧನೆಯನ್ನು ಗುರುತಿಸಿ ರಾಜ್ಯ ಸರ್ಕಾರ 2012 ರ ಸಾಲಿನಲ್ಲಿ ಡಾ: ರಾಜ್‌ಕುಮಾರ್ ಪ್ರಶಸ್ತಿ ನೀಡಿ ಗೌರವಿಸಿತು.

ಅವರ ನಿಧನ ಚಲನಚಿತ್ರ ರಂಗಕ್ಕೆ ತುಂಬಲಾರದ ನಷ್ಟವಾಗಿದೆ ಎಂದು ಸಚಿವರು ಸಂತಾಪ ಸೂಚಿಸಿದ್ದಾರೆ.

**ಸಂಖ್ಯೆ: 780/900**

## ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾಗಿ ಎನ್.ಆರ್. ವಿಶುಕುಮಾರ್ ಅಧಿಕಾರ ಸ್ವೀಕಾರ

**ಬೆಂಗಳೂರು, ಆಗಸ್ಟ್ 6, (ಕರ್ನಾಟಕ ವಾರ್ತೆ)**

**ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರಾಗಿ ಎನ್.ಆರ್. ವಿಶುಕುಮಾರ್ ಅವರು ಇಂದು ಅಧಿಕಾರ ಸ್ವೀಕರಿಸಿದರು. ಈ ಸಂದರ್ಭದಲ್ಲಿ ಇಲಾಖೆಯ ಹಿರಿಯ ಅಧಿಕಾರಿಗಳಾದ ಹೆಚ್.ಬಿ. ದಿನೇಶ್, ಎ.ಆರ್. ಪ್ರಕಾಶ್, ಬಸವರಾಜ ಕಂಬಿ ಸೇರಿದಂತೆ ಇತರ ಅಧಿಕಾರಿಗಳು ಉಪಸ್ಥಿತರಿದ್ದರು.**

**ಮೂಲತ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಅಧಿಕಾರಿಯಾಗಿರುವ ಅವರು ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದರು. ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ನಿರ್ದೇಶಕರ ಕರ್ತವ್ಯದೊಂದಿಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ನಿರ್ದೇಶಕರ ಹುದ್ದೆಯಲ್ಲಿ ಸಮವರ್ತಿತ ಪ್ರಭಾರದಲ್ಲಿರಿಸಿ ಸರ್ಕಾರ ಆದೇಶ ಹೊರಡಿಸಿದೆ.**

**ಸಂಖ್ಯೆ: 781/891**

# ಧೈರ್ಯ ಸಾಹಸ ಪ್ರದರ್ಶಿಸಿದ ಮಕ್ಕಳಿಗೆ ನೀಡುವ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನ

**ಬೆಂಗಳೂರು, ಆಗಸ್ಟ್ 6 (ಕರ್ನಾಟಕ ವಾರ್ತೆ)**

ಕರ್ನಾಟಕ ಸರ್ಕಾರದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ವತಿಯಿಂದ 6 ರಿಂದ 18 ವರ್ಷದೊಳಗಿನ ಧೈರ್ಯ ಸಾಹಸ ಪ್ರದರ್ಶಿಸಿದ ಮಕ್ಕಳಿಗೆ ನೀಡುವ ಹೊಯ್ಸಳ ಮತ್ತು ಕೆಳದಿ ಚೆನ್ನಮ್ಮ ಶೌರ್ಯ ಪ್ರಶಸ್ತಿಗೆ ನಾಮ ನಿರ್ದೇಶನಕ್ಕೆ ಅರ್ಜಿ ಆಹ್ವಾನಿಸಿದೆ.

ಮಕ್ಕಳು ತಮ್ಮ ಪ್ರಾಣದ ಹಂಗನ್ನು ತೊರೆದು ಹಾಗೂ ಸಮಯಪ್ರಜ್ಞೆಯಿಂದ ಇತರರ ಪ್ರಾಣದ ರಕ್ಷಣೆಗಾಗಿ ಧೈರ್ಯ ಸಾಹಸ ಪ್ರದರ್ಶಿಸಿದ ಬಾಲಕರಿಗೆ "ಹೊಯ್ಸಳ" ಮತ್ತು ಬಾಲಕಿಯರಿಗೆ "ಕೆಳದಿ ಚೆನ್ನಮ್ಮ" ಪ್ರಶಸ್ತಿಯನ್ನು ಮಕ್ಕಳ ದಿನಾಚರಣೆ ಕಾರ್ಯಕ್ರಮದಲ್ಲಿ ಪ್ರದಾನ ಮಾಡುತ್ತದೆ.

ಪ್ರಕರಣವು ಆಗಸ್ಟ್ 2017 ರಿಂದ ಜುಲೈ 2018ರೊಳಗೆ ನಡೆದಿರಬೇಕು. ದಿನಾಂಕ: 01.08.2000 ರಂದು ಹಾಗೂ ನಂತರ ಜನಿಸಿದ ಮಕ್ಕಳು ಈ ಪ್ರಶಸ್ತಿಗೆ ಅರ್ಹರಾಗಿರುತ್ತಾರೆ.

ಪ್ರಶಸ್ತಿಗೆ ಆಯ್ಕೆಯಾದ ಮಕ್ಕಳಿಗೆ ತಲಾ ರೂ.10,000/–ಗಳ ನಗದು ಬಹುಮಾನ ಮತ್ತು ಪ್ರಶಸ್ತಿ ಪತ್ರ ಒಳಗೊಂಡಿರುತ್ತದೆ.

2018ನೇ ಸಾಲಿನ ಪ್ರಶಸ್ತಿಗಾಗಿ ನಿಗದಿಪಡಿಸಿರುವ ಅರ್ಜಿ ನಮೂನೆಗಳನ್ನು ಸಂಬಂಧಿಸಿದ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಇವರಿಂದ ಪಡೆದು ಭರ್ತಿ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಜಿಲ್ಲೆಯ ಉಪ ನಿರ್ದೇಶಕರು, ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಇವರಿಗೆ ದಿನಾಂಕ:31.08.2018ರೊಳಗೆ ಸಲ್ಲಿಸತಕ್ಕದ್ದು. ಅರ್ಜಿಗಳನ್ನು ಕನ್ನಡ ಭಾಷೆಯಲ್ಲಿಯೇ ಸಲ್ಲಿಸತಕ್ಕದ್ದು ಅಧಿಕೃತ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 782/892**

## APPLICATIONS INVITED FOR HOYSALA AND KELADI CHENNAMMA BRAVERY AWARD FOR CHILDREN

Bengaluru, August 6 (Karnataka Information)

The Department of Women and Child Development, Government of Karnataka on the occasion of Children's Day, confers Bravery Award for the Children in the age group of 6 to 18 years who have exhibited exceptional courage and presence of mind to save the life of others in dangerous circumstances. Boys are identified under "Hoysala" and girls under "Keladi Chennamma" Award. The incident should have occurred between August 2017 to July 2018. Children born on or after 01.08.2000 are eligible for this Award. The Award carries cash prize of Rs. 10,000/- and a citation.

The prescribed forms for the year 2018 may be obtained from the Deputy Director of Women & Child Development Department in the respective Districts. The filled applications should be submitted to the concerned District Deputy Director of Women & Child Development Department on or before 31.08.2018. The applications should be submitted in Kannada only says official press release.

**ಸಂಖ್ಯೆ: 783/893**

## ಉತ್ತಮ ಶಿಕ್ಷಕರ ಆಯ್ಕೆ – ಶಿಕ್ಷಕರಿಂದ ಪ್ರಸ್ತಾವನೆ ಆಹ್ವಾನ

ಬೆಂಗಳೂರು, ಆಗಸ್ಟ್ 6, (ಕರ್ನಾಟಕ ವಾರ್ತೆ)

ಸಾರ್ವಜನಿಕ ಶಿಕ್ಷಣ ಇಲಾಖೆಯು 2018-19 ನೇ ಸಾಲಿನ ರಾಜ್ಯದ ಉತ್ತಮ ಶಿಕ್ಷಕರ ಪ್ರಶಸ್ತಿಗೆ ಅರ್ಹ ಆಸಕ್ತ ಶಿಕ್ಷಕರಿಂದ ಪ್ರಸ್ತಾವನೆಗಳನ್ನು ಆಹ್ವಾನಿಸಲಾಗಿದೆ.

ಪ್ರಸ್ತಾವನೆಗಳನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿಗೆ ಸಲ್ಲಿಸಲು ಆಗಸ್ಟ್ 13 ಕಡೆಯ ದಿನಾಂಕವಾಗಿರುತ್ತದೆ. ಈ ಹಿನ್ನೆಲೆಯಲ್ಲಿ ಆಸಕ್ತ ಶಿಕ್ಷಕರು ನಿಗಧಿತ ನಮೂನೆಗಳಲ್ಲಿ ಪ್ರಸ್ತಾವನೆಯನ್ನು ಕಾಲಮಿತಿಯೊಳಗೆ ಸಲ್ಲಿಸಬೇಕು.

ಅರ್ಜಿ ಸಲ್ಲಿಕೆ ಹಾಗೂ ಇನ್ನಿತರೆ ಹೆಚ್ಚುವರಿ ಮಾಹಿತಿಗಾಗಿ ಇಲಾಖಾ ವೆಬ್‌ಸೈಟ್‌ನ್ನು ವೀಕ್ಷಿಸಬಹುದಾಗಿದೆ ಅಥವಾ ಸಂಬಂಧಿಸಿದ ಕ್ಷೇತ್ರ ಶಿಕ್ಷಣದಿಕಾರಿಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಸಾರ್ವಜನಿಕ ಶಿಕ್ಷಣ ಇಲಾಖೆ ಪ್ರಕಟಣೆ ತಿಳಿಸಿದೆ.

**ಸಂಖ್ಯೆ: 784/894**

## ಡಿ.ಇಎಲ್.ಇಡಿ/ಡಿ.ಇಡಿ ಮುಖ್ಯ ಪರೀಕ್ಷೆಯ ಫಲಿತಾಂಶ ಪ್ರಕಟ

ಬೆಂಗಳೂರು, ಆಗಸ್ಟ್ 6, (ಕರ್ನಾಟಕ ವಾರ್ತೆ)

ಕರ್ನಾಟಕ ಪ್ರೌಢ ಶಿಕ್ಷ ಪರೀಕ್ಷಾ ಮಂಡಳಿಯು ಜೂನ್-2018 ರ ಮಾಹೆಯಲ್ಲಿ ಡಿ.ಇ.ಎಲ್.ಇ/ಡಿಇಡಿ ಮುಖ್ಯ ಪರೀಕ್ಷೆಯ ಫಲಿತಾಂಶ ಪಟ್ಟಿಯನ್ನು ರಾಜ್ಯದ ಎಲ್ಲಾ ಡಯಟ್‌ಗಳಿಗೆ ಕಳುಹಿಸಲಾಗಿದೆ.

ಸಂಬಂಧಿಸಿದ ಕಾಲೇಜಿನ ಪ್ರಾಂಶುಪಾಲರುಗಳು ಆಯಾ ಡಯಟ್‌ಗಳಿಂದ ಫಲಿತಾಂಶ ಪಟ್ಟಿಯನ್ನು ಪಡೆದು ದಿನಾಂಕ: 08-08-2018 ರಂದು ಬೆಳಿಗ್ಗೆ 10.00 ಗಂಟೆಗೆ ಫಲಿತಾಂಶವನ್ನು ಆಯಾ ಕಾಲೇಜಿನ ಸೂಚನಾ ಫಲಕದಲ್ಲಿ ಪ್ರಕಟಿಸುವಂತೆ ನಿರ್ದೇಶಕರು (ಇತರೆ ಪರೀಕ್ಷೆಗಳು), ಕರ್ನಾಟಕ ಪ್ರೌಢ ಶಿಕ್ಷಣ -ಪರೀಕ್ಷಾ ಮಂಡಳಿ, ಮಲ್ಲೇಶ್ವರಂ, ಬೆಂಗಳೂರು ಇವರು ಪ್ರಕಟಣೆಯಲ್ಲಿ ಹೇಳಿಕೆ ನೀಡಿರುತ್ತಾರೆ.

**ಸಂಖ್ಯೆ: 785/895**

## RESULTS ANNOUNCED

Bengaluru, August 06, (Karnataka Information)

As per the statement of Director (Other Exams), Karnataka Secondary Education Examination Board, Bengaluru. The result of the DE1.Ed/D.Ed Main Examination conducted in June 2018 by Karnataka Secondary Education Examination Board, Bengaluru is sent to the concerned DIET's and instructed to announce the result on 08-08-2018 at 10.00 AM in respective Colleges says official press release.